ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 241 ಜಿಪಸ 2014

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:04-06-2015

## ಅಧಿಕೃತ ಜ್ಞಾಪನ

ವಿಷಯ: 2014-15ನೇ ಸಾಲಿನ ರಾಜೀವ್‌ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆಯಡಿ ಜಿಲ್ಲಾ ಪಂಚಾಯಿತಿ ಸಂಪನ್ಮೂಲ ಕಟ್ಟಡವನ್ನು ನಿರ್ಮಿಸುವ ಕಾಮಗಾರಿ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಉಲ್ಲೇಖ
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012, ದಿನಾಂಕ: 26.02.2014.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014 (ಪಿ-2), ದಿನಾಂಕ: 27.11.2014.
3. ಮುಖ್ಯ ಅಭಿಯಂತರರು (ಕೇಂದ್ರೀಯ) ವ್ಯವಸ್ಥಾಪಕ ನಿರ್ದೇಶಕರ ಪರವಾಗಿ ಕೆ.ಆರ್.ಐ.ಡಿ.ಎಲ್ ಬೆಂಗಳೂರು ಇವರ ಪತ್ರ ಸಂಖ್ಯೆ: ಕೆ.ಆರ್.ಐ.ಡಿ.ಎಲ್/ಕಾಮಗಾರಿ/ಜಿಪಸ/2014, ದಿನಾಂಕ: 21.11.2014, 11.11.2014 ಮತ್ತು 17.12.2014.

****

**ಪ್ರಸ್ತಾವನೆ:**

2013-14 ಹಾಗೂ 2014-15 ನೇ ಸಾಲಿನ ರಾಜೀವ್ ಗಾಂಧಿ ಪಂಚಾಯತ್ ಸಶಕ್ತೀಕರಣ ಯೋಜನೆಯಡಿ ಪಂಚಾಯತ್ ರಾಜ್ ವ್ಯವಸ್ಥೆಯನ್ನು ಸದೃಢ ಹಾಗೂ ಸಬಲೀಕರಣಕ್ಕಾಗಿ ಚುನಾಯಿತ ಪ್ರತಿನಿಧಿಗಳಿಗೆ ಸ್ಥಳೀಯ ಅವಶ್ಯಕತೆ, ಮೂಲಭೂತ ಸೌಲಭ್ಯ ಮತ್ತು ಅಭಿವೃದ್ಧಿ ವಿಷಯಗಳಿಗೆ ಸಂಬಂಧಿಸಿದಂತೆ ವಿಚಾರ ಧಾರೆಗಳನ್ನು ವೃದ್ಧಿಸುವುದು ಹಾಗೂ ಸಾಂಸ್ಥಿಕ ಆಡಳಿತದಲ್ಲಿ ಭಾಗವಹಿಸಲು ಸಾಮರ್ಥ್ಯಾಭಿವೃದ್ಧಿ ತರಬೇತಿಯನ್ನು ನೀಡುವುದು ಅತ್ಯವಶ್ಯಕವಾಗಿದೆ. ಸ್ಥಳೀಯವಾಗಿ ತರಬೇತಿ ನೀಡುವ ಹಾಗೂ ಗ್ರಾಮೀಣಾಭಿವೃದ್ಧಿಗೆ ಪೂರಕವಾಗಿ ಸಂಶೋಧನೆಗಳನ್ನು ನಡೆಸುವ ಉದ್ದೇಶದಿಂದ ಪ್ರತಿ ಜಿಲ್ಲಾ ಪಂಚಾಯತಿ ಕೇಂದ್ರದಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರವನ್ನು ಸ್ಥಾಪಿಸಲು ಉಲ್ಲೇಖ (1) ಮತ್ತು (2) ರ ಆದೇಶಗಳ ಮೂಲಕ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ ಹಾಗೂ ಸದರಿ ಯೋಜನೆಯಡಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರಗಳ ಹೊಸ ಕಟ್ಟಡ ನಿರ್ಮಿಸಲು ಕಾಮಗಾರಿ ಅಚಿದಾಜು ಪಟ್ಟಿಯನ್ನು ರೂ. 150.00 ಲಕ್ಷಗಳಿಗೆ ತಯಾರಿಸಿ ಆಡಳಿತ್ಮಾಕ ಅನುಮೋದನೆ ನೀಡಲು ಕೋರಿ ಉಲ್ಲೇಖ (3) ರಲ್ಲಿ ಪ್ರಸ್ತಾವನೆ ಸಲ್ಲಿಸಿರುವ ಹಿನ್ನೆಲೆಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿರುವ್ಯದರಿಂದ ಈ ಕೆಳಕಂಡ ಆದೇಶ.

| ಕ್ರಸಂ | ಕಾಮಗಾರಿಗಳ ವಿವರ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಚಾಮರಾಜನಗರ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದ ನಿರ್ಮಾಣ | 150.00 |
| 2 | ಬಳ್ಳಾರಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದ ನಿರ್ಮಾಣ | 150.00 |
| 3 | ಮೈಸೂರು ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದ ನಿರ್ಮಾಣ | 150.00 |

ಆದೇಶ:

ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಪರಿಶೀಲಿಸಿ 2013-14 ಹಾಗೂ 2014-15 ನೇ ಸಾಲಿನ ರಾಜೀವ್ ಗಾಂಧಿ ಪಂಚಾಯತ್ ಸಶಕ್ತೀಕರಣ ಯೋಜನೆಯಡಿ ಚಾಮರಾಜನಗರ, ಮೈಸೂರು ಹಾಗೂ ಬಳ್ಳಾರಿ ಜಿಲ್ಲೆಗಳ ಜಿಲ್ಲಾ ಪಂಚಾಯತಿ ಸಂಪನ್ಮೂಲ ತರಬೇತಿ ಕೇಂದ್ರ ಕಟ್ಟಡಗಳನ್ನು ನಿರ್ಮಿಸಲು ಅಂದಾಜು ಪಟ್ಟಿಗಳಿಗೆ ತಲಾ ರೂ. 150.00 ಲಕ್ಷಗಳಂತೆ ಒಟ್ಟು 450.00 (ನಾಲ್ಕೂನೂರ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಲಕ್ಷಗಳಿಗೆ ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಆಡಳಿತಾತ್ಮಕ ಅನುಮೋದನೆಯನ್ನು ಪ್ರತ್ಯೇಕವಾಗಿ ನೀಡಿ ಆದೇಶಿಸಿದೆ.

<u>ನಿಬಂಧನೆಗಳು</u>

1. ಅನುದಾನವು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಿದೆಯೋ ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸುವುದು.
2. ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದ ವಾಸ್ತು ವಿನ್ಯಾಸವು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು, ಇವರ ಸಲಹೆಯಂತೆ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮವು ಸಿದ್ಧಪಡಿಸಿರುವ ಮಾದರಿಯಲ್ಲಿರಬೇಕು.
3. ಕಾಲಮಿತಿಯಲ್ಲಿ ಕಟ್ಟಡವನ್ನು ನಿರ್ಮಿಸಬೇಕು.
4. Non-Duplication, Non-Diversion ಮತ್ತು Non-Embezzlement ಪ್ರಮಾಣ ಪತ್ರಗಳನ್ನು ಸಲ್ಲಿಸುವುದು.
5. ಅನುದಾನದ ಬಳಕೆ ಪ್ರಮಾಣ ಪತ್ರವನ್ನು ಜಿ.ಎಫ್.ಆರ್.19-ಎ ನಮೂನೆಯಲ್ಲಿ ಕಡ್ಡಾಯವಾಗಿ ಸಲ್ಲಿಸುವುದು. ಈ ಕಾಮಗಾರಿಗಳ ಮಾಹಿತಿಯನ್ನು ವರ್ಕ್‌ಸಾಫ್ಟ್ ತಂತ್ರಾಂಶದಲ್ಲಿ ಅಳವಡಿಸುವುದು ಹಾಗೂ ಹಣ ಪಾವತಿಸುವಾಗ ವರ್ಕ್‌ಸಾಫ್ಟ್ ಮೂಲಕವೇ ಪಾವತಿಸುವುದು.

(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಪ್ರತಿಯನ್ನು:</u>

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ಸರ್ಕಲ್, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತಿ, ಚಾಮರಾಜನಗರ, ಮೈಸೂರು ಹಾಗೂ ಬಳ್ಳಾರಿ.
3. ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತಿ, ಜಿಲ್ಲಾ ಪಂಚಾಯತಿ, ಚಾಮರಾಜನಗರ, ಮೈಸೂರು ಹಾಗೂ ಬಳ್ಳಾರಿ.
4. ಕಾರ್ಯಪಾಲಕ ಇಂಜಿನೀಯರ್, ಕೆ.ಆರ್.ಐ.ಡಿ.ಎಲ್, ಚಾಮರಾಜನಗರ, ಮೈಸೂರು ಹಾಗೂ ಬಳ್ಳಾರಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ನಿರ್ದೇಶಕರು (ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

ಹೊರಡಿಸಿದೆ
ದಿನಾಂಕ 10/6
ಗ್ರಾ.ಅ.ಪಂ. ಇಲಾಖೆ